**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ.1350/2023**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಯಶೋಧಮ್ಮ | ಸಿ.ಡಬ್ಲ್ಯೂ-1 |
| ಗಂಡನ ಹೆಸರು | : | ನಾಗರಾಜ | ಪಿ.ಡಬ್ಲ್ಯೂ-1 |
| ವಯಸ್ಸು | : | 50 ವರ್ಷ | |
| ಉದ್ಯೋಗ | : | ವ್ಯಾಪಾರ | |
| ವಾಸಸ್ಥಳ | : | ಚಳ್ಳಕೆರೆ | ದಿಃ 26-03-2026. |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಚಾಸಾ-2 ನನ್ನ ಗಂಡ . ಆರೋಪಿತರು ನನಗೆ ಗೊತ್ತು .

ಆರೋಪಿತರು ಎಂದಿಗೂ ಅಕ್ರಮ ಗುಂಪು ಕಟ್ಟಿಕೊಂಡು ಬಂದು ದೊಂಬಿ ಮಾಡಿರುವುದಿಲ್ಲ. ಆರೋಪಿತರು ಎಂದಿಗೂ ನನಗೆ ಮತ್ತು ಚಾಸಾ-2 ರವರನ್ನು ಅಡ್ಡಗಟ್ಟಿ ತಡೆದು ನಿಲ್ಲಿಸಿರುವುದಿಲ್ಲ. ಅವಾಚ್ಯ ಶಬ್ದಗಳಿಂದ ನಿಂದಿಸಿರುವುದಿಲ್ಲ, ಕೈಕಾಲುಗಳಿಂದ ಹಲ್ಲೆ ಮಾಡಿರುವುದಿಲ್ಲ. ಯಾವುದೇ ವಸ್ತುವಿನಿಂದ ಯಾವುದೇ ಹಲ್ಲೆ ಮಾಡಿರುವುದಿಲ್ಲ. ನನ್ನ ಮಾನಕ್ಕೆ ಚ್ಯುತಿ ಉಂಟಾಗುವಂತೆ ನಡೆದುಕೊಂಡಿರುವುದಿಲ್ಲ. ನನಗೆ ಪ್ರಾಣದ ಬೆದರಿಕೆ ಹಾಕಿರುವುದಿಲ್ಲ. ಹಲ್ಲೆ ಕುರಿತು ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಪಿರ್ಯಾದಿಯನ್ನು ನೀಡಿಲ್ಲ.

ಸಾಕ್ಷಿಗೆ ಪಿರ್ಯಾದಿಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿದ್ದು, ಪಿರ್ಯಾದಿಯನ್ನು ನಿಪಿಃ 1 ಅಂತ, ಸಾಕ್ಷಿಯ ಹೆಬ್ಬೆಟ್ಟಿನ ಗುರುತನ್ನು ನಿಪಿಃ 1(ಎ) ಅಂತ ಗುರುತಿಸಲಾಯಿತು. ನಿಪಿಃ 1 ರಲ್ಲಿ ಏನು ಬರೆದಿರುತ್ತದೆ ಅಂತ ನನಗೆ ಗೊತ್ತಿಲ್ಲ. ನಿಪಿಃ 1 ಕ್ಕೆ ನಾನು ಸುಮಾರು 5 ವರ್ಷದ ಹಿಂದೆ ಠಾಣೆಯಲ್ಲಿ ಹೆಬ್ಬಟ್ಟಿನ ಗುರುತನ್ನು ಹಾಕಿರುತ್ತೇನೆ.

ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಹೆಬ್ಬಟ್ಟಿನ ಗುರುತನ್ನು ನೋಡಿ ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿಃ2 ಅಂತ, ಸಾಕ್ಷಿಯ ಹೆಬ್ಬಟ್ಟಿನ ಗುರುತನ್ನು ನಿಪಿಃ 2(ಎ) ಅಂತ ಗುರುತಿಸಲಾಯಿತು.

ಪೊಲೀಸರು ಘಟನಾ ಸ್ಥಳಕ್ಕೆ ಬಂದಿರುವುದಿಲ್ಲ. ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ. ನಿಪಿ.2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಯಾವುದೇ ವಸ್ತುವನ್ನು ಜಪ್ತು ಪಡಿಸಿಕೊಂಡಿರುವುದಿಲ್ಲ. ನಿಪಿಃ 2 ಕ್ಕೆ ನಿಪಿಃ 1 ಕ್ಕೆ ಹೆಬ್ಬೆಟ್ಟಿನ ಗುರುತನ್ನು ಮಾಡುವಾಗ ಹೆಬ್ಬೆಟ್ಟಿನ ಗುರುತನ್ನು ಹಾಕಿರುತ್ತೇನೆ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**

ದಿನಾಂಕ 06.10.2023 ರಂದು ರಾತ್ರಿ 08-30 ಗಂಟೆ ಸಮಯದಲ್ಲಿ ನಾನು, ಚಾಸಾ-2 ರವರು ನಮ್ಮ ಮನೆಗೆ ಹೋಗಲು ಆರೋಪಿತರ ಮನೆಯ ಮುಂದೆ ಹೋಗುತ್ತಿದ್ದಾಗ ಆರೋಪಿತರೆಲ್ಲರೂ ಅಕ್ರಮವಾಗಿ ಗುಂಪು ಕಟ್ಟಿಕೊಂಡು ಬಂದು ನಮ್ಮನ್ನು ಅಡ್ಡಗಟ್ಟಿ ತಡೆದು ನಿಲ್ಲಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರೆಲ್ಲರೂ ಈ ರಸ್ತೆಯಲ್ಲಿ ಯಾಕೆ ಓಡಾಡುತ್ತೀರಾ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ನನಗೆ ಕೈ ಕಾಲುಗಳಿಂದ ಹೊಡೆದು ನೋವುಂಟು ಪಡಿಸಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿಯು ಕೋಲಿನಿಂದ ನನ್ನ ಬಲಗೈಗೆ ಹೊಡೆದು ತೀವ್ರ ಸ್ವರೂಪದ ನೊಂವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. 2 ನೇ ಆರೋಪಿಯು ಸಾರ್ವಜನಿಕ ರಸ್ತೆಯಲ್ಲಿ ನನ್ನ ತಲೆಕೂದಲುಹಿಡಿದುಎಳೆದಾಡಿ ಅವಮಾನ ಮಾಡಿರುತ್ತಾನೆ ಎಂದರೆ ಸರಿಯಲ್ಲ. ಆರೋಪಿ ತರು ಇನ್ನೊಂದು ಬಾರಿ ಈ ರಸ್ತೆಯಲ್ಲಿ ಓಡಾಡಿದರೆ ಪ್ರಾಣ ತೆಗೆಯುವುದಾಗಿ ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ.

ಈಗ ಓದಿ ಹೇಳಿದಂತೆ ನಾನು ಪೊಲೀಸರಿಗೆ ನಿಪಿಃ 1 ರಂತೆ ಪಿರ್ಯಾದಿ ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿನಾಂಕ 07.10.2023 ರಂದು ಚಾಸಾ-5 ಮತ್ತು 6 ರವರ ಸಮಕ್ಷಮ ನಾನು ಸ್ಥಳ ತೋರಿಸಿದ ಮೇರೆಗೆ ಸಂಜೆ 04.00 ರಿಂದ 04.45 ಗಂಟೆಯವರೆಗೆ ನಿಪಿ.2 ರಂತೆ ಮಹಜರ್ ಕ್ರಮ ಜರುಗಿಸಿ ಕೋಲನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ಪ್ರಕರಣದ ಕುರಿತು ಸಂಪೂರ್ಣ ಮಾಹಿತಿ ಇದ್ದರೂ ಕೂಡ ಈಗ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾವು ಹಾಗೂ ಆರೋಪಿತರು ರಾಜೀ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಅದೇ ಕಾರಣಕ್ಕೆ ಈಗ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಎ ಆರ್ ಕೆ., ಆರೋಪಿ ಪರ ವಕೀಲರಿಂದಃ**

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ